ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: **1037/2023**

ಪಿಡಬ್ಲ್ಯೂ-**1**
ಸಿಡಬ್ಲ್ಯೂ-**3**

ಸಾಕ್ಷಿಗೆ ದಿನಾಂಕ **26.09.2025** ರಂದು ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು | : | ಶೇಖರಪ್ಪ |
| ತಂದೆಯ ಹೆಸರು | : | ಹನುಮಂತಪ್ಪ |
| ವಯಸ್ಸು | : | 61 ವರ್ಷ |
| ಉದ್ಯೋಗ | : | ಕೂಲಿ ಕೆಲಸ |
| ವಾಸಸ್ಥಳ | : | ಮಳಲಿ ಗ್ರಾಮ |

<u>ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ</u>

ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿಗಳ ಪರಿಚಯ ಇದ್ದು , ಅವರು ನಮ್ಮ ಊರಿನವರು.

ಚಾಸಾ-3 ರವರ ಪರಿಚಯ ಇರುತ್ತದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ವಿಚಾರ ಗೊತ್ತಿಲ್ಲ. ಈಗ ನಾನು ನೋಡುತ್ತಿರುವ ದಾಖಲೆಯಲ್ಲಿ ಇರುವ ಸಹಿ ನನ್ನದಾಗಿರುತ್ತದೆ. ಸದರಿ ದಾಖಲಾತಿಯು ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು ಅದನ್ನು ನಿಪಿ-**1** ಎಂದು, ಸಾಕ್ಷಿಯ ಸಹಿಯನ್ನು ನಿಪಿ-**1(ಎ)** ಎಂದು ಗುರುತಿಸಲಾಯಿತು. ನಿ.ಪಿ-1 ಕ್ಕೆ ನಾನು 2 ವರ್ಷಗಳ ಹಿಂದೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪೋಲಿಸರ ಸೂಚನೆ ಮೇರೆಗೆ ಸಹಿ ಮಾಡಿರುತ್ತೇನೆ. ಯಾವ ಕಾರಣಕ್ಕೆ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಸ್ತುವನ್ನು ಅಮಾನತ್ತು ಮಾಡಿಕೊಂಡಿರುವುದಿಲ್ಲ. ನಿಪಿ-1 ರಲ್ಲಿನ ವಿಚಾರಗಳು ನನಗೆ ಗೊತ್ತಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಮುದ್ದೆ ಮಾಲನ್ನು ನೋಡಿ ಗುರುತಿಸಿರುವುದಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು)

<u>ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ</u>

ದಿನಾಂಕ 06.08.2023 ರಂದು ಸಂಜೆ 5 ಗಂಟೆ ಸಮಯದಲ್ಲಿ ನಾನು ಮತ್ತು ಚಾಸಾ-3 ರವರು ನಮ್ಮ ಗ್ರಾಮದ ಬಸ್ ನಿಲ್ದಾಣದಲ್ಲಿ ನಿಂತಿರುವಾಗ ಚಾಸಾ-1 ರವರು ನಮ್ಮನ್ನು ನಮ್ಮ ಗ್ರಾಮದ ಹೊರವಲಯಕ್ಕೆ ಬರಮಾಡಿಕೊಂಡು ಅವರಿಗೆ ನಮ್ಮ ಗ್ರಾಮದ ಮಂಜಪ್ಪ ತಂದೆ ಬಸಪ್ಪ ಮತ್ತು ಕಲಾವತಿ ಗಂಡ ಹನುಮಂತಪ್ಪ ಇವರುಗಳು ಸರ್ಕಾರದ ಯಾವುದೇ ಪರವಾನಿಗೆ ಇಲ್ಲದೆ ಅಕ್ರಮವಾಗಿ ಮದ್ಯದ ಪೌಚ್ ಗಳನ್ನು ಸಂಗ್ರಹಿಸಿ ಸಾರ್ವಜನಿಕರಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಸಲುವಾಗಿ ಹೊಸದುರ್ಗ ಟೌನ್ ನಿಂದ ಮಳಲಿ ಗ್ರಾಮಕ್ಕೆ ಸಾಗಾಣಿಕೆ ಮಾಡುತ್ತಿರುವ ಬಗ್ಗೆ ಬಾತ್ಮಿ ಬಂದಿದ್ದು ದಾಳಿ ಮಾಡುವ ಸಮಯದಲ್ಲಿ ಪಂಚರಾಗಿ ಸಹಕರಿಸುವಂತೆ ನಮಗೆ ಕೋರಿದ್ದು ನಾವು ಒಪ್ಪಿಕೊಂಡೆವು ಎಂದರೆ ಸರಿಯಲ್ಲ. ನಂತರ ಚಾ.ಸಾ-1 ಮತ್ತು ಸಿಬ್ಬಂದಿಗಳೊಡನೆ ಒಂದು ಖಾಸಗಿ ವಾಹನಲ್ಲಿ ನಮ್ಮ ಗ್ರಾಮದಬಸ್ ನಿಲ್ದಾಣದಬಳಿ ಕರೆದುಕೊಂಡು ಹೋಗುವಾಗ ಬಸ್ ನಿಲ್ದಾಣದಲ್ಲಿ ನಿಂತಿದ್ದ ಇಬ್ಬರು ಆಸಾಮಿಗಳು ದೂರದಿಂದಲೇ ಸಮವಸ್ತ್ರದಲ್ಲಿ ಇದ್ದ ಪೋಲಿಸರನ್ನು ನೋಡಿ ಓಡಿ ಹೋದರು , ಹಿಡಿಯಲು ಸಾಧ್ಯವಾಗಲಿಲ್ಲ ಎಂದರೆ ಸರಿಯಲ್ಲ. ಓಡಿ ಹೋದ ಆಸಾಮಿಗಳು ಮಂಜಪ್ಪ ತಂದೆ ಬಸಪ್ಪ ಮತ್ತು ಕಲಾವತಿ ಗಂಡ ಹನುಮಂತಪ್ಪ ಇಬ್ಬರು ಮಳಲಿ ಗ್ರಾಮ ಎಂದು ನಾವು ತಿಳಿಸಿದೆವು ಎಂದರೆ ಸರಿಯಲ್ಲ. ನಂತರ ಸ್ಥಳಕ್ಕೆ ಹೋಗಿ ನೋಡಲಾಗಿ ಸ್ಥಳದಲ್ಲಿ ನೋಡಲಾಗಿ 90 ಎಂ ಎಲ್ ನ 39 ರಾಜಾ ವಿಸ್ಕಿಯ ಪೌಚ್ ಗಳು ಇರುವುದು ಕಂಡುಬಂತು ಎಂದರೆ ಸರಿಯಲ್ಲ. ಸದರಿ ಮದ್ಯ ಸಂಗ್ರಹಣೆ ಮಾಡಿದ ಬಗ್ಗೆ ಆರೋಪಿ ಬಳಿ ಯಾವುದೇ ದಾಖಲೆ ಅಥವಾ ರಹದಾರಿಪತ್ರ ಇರುವುದಿಲ್ಲ ಎಂದು ಖಚಿತಪಡಿಸಿಕೊಂಡು ದೊರೆತ ಎಲ್ಲಾ 39 ಪೌಚ್‌ಗಳನ್ನು ರಾಸಾಯನಿಕ ಪರೀಕ್ಷೆಗಾಗಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಮಾದರಿಗೆ ತೆಗೆದು ಚೀಲದಿಂದ ಸುತ್ತಿ ದಾರದಿಂದ ಕಟ್ಟಿ ಕೆ.ಎಸ್.ಪಿ ಎಂಬ ಅರಗು ಸೀಲು ಕ್ರಮ ಜರುಗಿಸಲಾಯಿತು ಎಂದರೆ ಸರಿಯಲ್ಲ. ಮಹಜರ್ ಕ್ರಮವನ್ನು ನಿಪಿ-1 ರಂತೆ ಸಂಜೆ 5.15 ರಿಂದ 6.00 ಗಂಟೆ ರವರೆಗೆ ಬರೆದು ಮುಗಿಸಿದರು ಎಂದರೆ ಸರಿಯಲ್ಲ. ನಿಪಿ-1 ಕ್ಕೆ ನಾನು ಸ್ದಳದಲ್ಲಿ ಹಾಜರಿದ್ದು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಈಗ ಓದಿ ಹೇಳಿದಂತೆ ನಾನು ಈ ಬಗ್ಗೆ ದಿನಾಂಕ **06.08.2023** ರಂದು ಪೊಲೀಸರ ಮುಂದೆ ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಹೇಳಿಕೆಯನ್ನು ನಿರಾಕರಿಸಿದ ಕಾರಣ ನಿಪಿ-**2** ಎಂದು ಗುರುತಿಸಲಾಯಿತು.

ಆರೋಪಿಗಳು ನಮ್ಮ ಊರಿನವನಾದ ಕಾರಣ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ದಾಳಿ ಸಮಯದಲ್ಲಿ ಹಾಜರಿದ್ದು ನಿಪಿ-2 ರಂತೆ ಹೇಳಿಕೆ ನೀಡಿದ್ದರೂ ಕೂಡ ಸುಳ್ಳು ಸಾಕ್ಷ್ಯ ನುಡಿಯತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿ ಪರ ಶ್ರೀಮತಿ ಹೆಚ್ ಎಸ್ ಕೆ ವಕೀಲರಿಂದ

ಆರೋಪಿ ಪರ ವಕೀಲರು ತಮ್ಮ ಪರ ಪಾಟೀ ಸವಾಲು ಏನೂ ಇಲ್ಲ ಎಂದು ಸಲ್ಲಿಸುತ್ತಾರೆ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ ಅದೆ.

(ಪ್ರಸನ್ನಕುಮಾರ್ ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಜೆ ಎಂ ಎಫ್ ಸಿ
ನ್ಯಾಯಾಲಯ,ಹೊಸದುರ್ಗ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: **1037/2023**

ಪಿಡಬ್ಲ್ಯೂ-**2**
ಸಿಡಬ್ಲ್ಯೂ-**3**

ಸಾಕ್ಷಿಗೆ ದಿನಾಂಕ **26.09.2025** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಹೆಸರು : ಸಂತೋಷ

ತಂದೆಯ ಹೆಸರು : ನಾಗರಾಜಪ್ಪ

ವಯಸ್ಸು : 36 ವರ್ಷ

ಉದ್ಯೋಗ : ಕೂಲಿ ಕೆಲಸ

ವಾಸಸ್ಥಳ : ಮಳಲಿ ಗ್ರಾಮ

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿಗಳ ಪರಿಚಯ ಇದ್ದು , ಅವರು ನಮ್ಮ ಊರಿನವರು.

ಚಾಸಾ-2 ರವರ ಪರಿಚಯ ಇದ್ದು ಅವರು ನನ್ನ ಮಾವ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ವಿಚಾರ ಗೊತ್ತಿಲ್ಲ. ಈಗ ನಾನು ನೋಡುತ್ತಿರುವ ದಾಖಲೆಯಲ್ಲಿ ಇರುವ ಸಹಿ ನನ್ನದಾಗಿರುತ್ತದೆ. ಸದರಿ ದಾಖಲಾತಿಯು ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು ಅದನ್ನು ನಿಪಿ-**1** ಎಂದು, ಸಾಕ್ಷಿಯ ಸಹಿಯನ್ನು ನಿಪಿ-**1(**ಎ**)** ಎಂದು ಗುರುತಿಸಲಾಯಿತು. ನಿ.ಪಿ-1 ಕ್ಕೆ ನಾನು 2 ವರ್ಷಗಳ ಹಿಂದೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪೋಲಿಸರ ಸೂಚನೆ ಮೇರೆಗೆ ಸಹಿ ಮಾಡಿರುತ್ತೇನೆ. ಯಾವ ಕಾರಣಕ್ಕೆ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಸ್ತುವನ್ನು ಅಮಾನತ್ತು ಮಾಡಿಕೊಂಡಿರುವುದಿಲ್ಲ. ನಿಪಿ-1 ರಲ್ಲಿನ ವಿಚಾರಗಳು ನನಗೆ ಗೊತ್ತಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಮುದ್ದೆ ಮಾಲನ್ನು ನೋಡಿ ಗುರುತಿಸಿರುವುದಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು**)**

ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ

ದಿನಾಂಕ 06.08.2023 ರಂದು ಸಂಜೆ 5 ಗಂಟೆ ಸಮಯದಲ್ಲಿ ನಾನು ಮತ್ತು ಚಾಸಾ-2 ರವರು ನಮ್ಮ ಗ್ರಾಮದ ಬಸ್ ನಿಲ್ದಾಣದಲ್ಲಿ ನಿಂತಿರುವಾಗ ಚಾಸಾ-1 ರವರು ನಮ್ಮನ್ನು ನಮ್ಮ ಗ್ರಾಮದ ಹೊರವಲಯಕ್ಕೆ ಬರಮಾಡಿಕೊಂಡು ಅವರಿಗೆ ನಮ್ಮ ಗ್ರಾಮದ ಮಂಜಪ್ಪ ತಂದೆ ಬಸಪ್ಪ ಮತ್ತು ಕಲಾವತಿ ಗಂಡ ಹನುಮಂತಪ್ಪ ಇವರುಗಳು ಸರ್ಕಾರದ ಯಾವುದೇ ಪರವಾನಿಗೆ ಇಲ್ಲದೆ ಅಕ್ರಮವಾಗಿ ಮದ್ಯದ ಪೌಚ್ ಗಳನ್ನು ಸಂಗ್ರಹಿಸಿ ಸಾರ್ವಜನಿಕರಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಸಲುವಾಗಿ ಹೊಸದುರ್ಗ ಟೌನ್ ನಿಂದ ಮಳಲಿ ಗ್ರಾಮಕ್ಕೆ ಸಾಗಾಣಿಕೆ ಮಾಡುತ್ತಿರುವ ಬಗ್ಗೆ ಬಾತ್ಮಿ ಬಂದಿದ್ದು ದಾಳಿ ಮಾಡುವ ಸಮಯದಲ್ಲಿ ಪಂಚರಾಗಿ ಸಹಕರಿಸುವಂತೆ ನಮಗೆ ಕೋರಿದ್ದು ನಾವು ಒಪ್ಪಿಕೊಂಡೆವು ಎಂದರೆ ಸರಿಯಲ್ಲ. ನಂತರ ಚಾ.ಸಾ-1 ಮತ್ತು ಸಿಬ್ಬಂದಿಗಳೊಡನೆ ಒಂದು ಖಾಸಗಿ ವಾಹನಲ್ಲಿ ನಮ್ಮ ಗ್ರಾಮದಬಸ್ ನಿಲ್ದಾಣದಬಳಿ ಕರೆದುಕೊಂಡು ಹೋಗುವಾಗ ಬಸ್ ನಿಲ್ದಾಣದಲ್ಲಿ ನಿಂತಿದ್ದ ಇಬ್ಬರು ಆಸಾಮಿಗಳು ದೂರದಿಂದಲೇ ಸಮವಸ್ತ್ರದಲ್ಲಿ ಇದ್ದ ಪೋಲಿಸರನ್ನು ನೋಡಿ ಓಡಿ ಹೋದರು , ಹಿಡಿಯಲು ಸಾಧ್ಯವಾಗಲಿಲ್ಲ ಎಂದರೆ ಸರಿಯಲ್ಲ. ಓಡಿ ಹೋದ ಆಸಾಮಿಗಳು ಮಂಜಪ್ಪ ತಂದೆ ಬಸಪ್ಪ ಮತ್ತು ಕಲಾವತಿ ಗಂಡ ಹನುಮಂತಪ್ಪ ಇಬ್ಬರು ಮಳಲಿ ಗ್ರಾಮ ಎಂದು ನಾವು ತಿಳಿಸಿದೆವು ಎಂದರೆ ಸರಿಯಲ್ಲ. ನಂತರ ಸ್ಥಳಕ್ಕೆ ಹೋಗಿ ನೋಡಲಾಗಿ ಸ್ಥಳದಲ್ಲಿ ನೋಡಲಾಗಿ 90 ಎಂ ಎಲ್ ನ 39 ರಾಜಾ ವಿಸ್ಕಿಯ ಪೌಚ್ ಗಳು ಇರುವುದು ಕಂಡುಬಂತು ಎಂದರೆ ಸರಿಯಲ್ಲ. ಸದರಿ ಮದ್ಯ ಸಂಗ್ರಹಣೆ ಮಾಡಿದ ಬಗ್ಗೆ ಆರೋಪಿ ಬಳಿ ಯಾವುದೇ ದಾಖಲೆ ಅಥವಾ ರಹದಾರಿಪತ್ರ ಇರುವುದಿಲ್ಲ ಎಂದು ಖಚಿತಪಡಿಸಿಕೊಂಡು ದೊರೆತ ಎಲ್ಲಾ 39 ಪೌಚ್‌ಗಳನ್ನು ರಾಸಾಯನಿಕ ಪರೀಕ್ಷೆಗಾಗಿ ನನ್ನ ಮತ್ತು ಚಾಸಾ-2 ರವರ ಸಮಕ್ಷಮ ಮಾದರಿಗೆ ತೆಗೆದು ಚೀಲದಿಂದ ಸುತ್ತಿ ದಾರದಿಂದ ಕಟ್ಟಿ ಕೆ.ಎಸ್.ಪಿ ಎಂಬ ಅರಗು ಸೀಲು ಕ್ರಮ ಜರುಗಿಸಲಾಯಿತು ಎಂದರೆ ಸರಿಯಲ್ಲ. ಮಹಜರ್ ಕ್ರಮವನ್ನು ನಿಪಿ-1 ರಂತೆ ಸಂಜೆ 5.15 ರಿಂದ 6.00 ಗಂಟೆ ರವರೆಗೆ ಬರೆದು ಮುಗಿಸಿದರು ಎಂದರೆ ಸರಿಯಲ್ಲ. ನಿಪಿ-1 ಕ್ಕೆ ನಾನು ಸ್ಥಳದಲ್ಲಿ ಹಾಜರಿದ್ದು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಈಗ ಓದಿ ಹೇಳಿದಂತೆ ನಾನು ಈ ಬಗ್ಗೆ ದಿನಾಂಕ **06.08.2023** ರಂದು ಪೊಲೀಸರ ಮುಂದೆ ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು

ಹೇಳಿಕೆಯನ್ನು ನಿರಾಕರಿಸಿದ ಕಾರಣ ನಿಪಿ-**3** ಎಂದು ಗುರುತಿಸಲಾಯಿತು**.**

ಆರೋಪಿಗಳು ನಮ್ಮ ಊರಿನವನಾದ ಕಾರಣ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ದಾಳಿ ಸಮಯದಲ್ಲಿ ಹಾಜರಿದ್ದು ನಿಪಿ-3 ರಂತೆ ಹೇಳಿಕೆ ನೀಡಿದ್ದರೂ ಕೂಡ ಸುಳ್ಳು ಸಾಕ್ಷ್ಯ ನುಡಿಯತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿ ಪರ ಶ್ರೀಮತಿ ಹೆಚ್ ಎಸ್ ಕೆ ವಕೀಲರಿಂದ</u>

ಆರೋಪಿ ಪರ ವಕೀಲರು ತಮ್ಮ ಪರ ಪಾಟೀ ಸವಾಲು ಏನೂ ಇಲ್ಲ ಎಂದು ಸಲ್ಲಿಸುತ್ತಾರೆ**.**

ಮರುವಿಚಾರಣೆ ಇಲ್ಲ**.**

**(**ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತ್ತಲೇಖನದಂತೆ ಬೆರಳಚ್ಚು ಮಾಡಲಾಯಿತು**)**

ಓ**.**ಹೇ**.**ಕೆ**.**ಸರಿ ಅದೆ**.**

(ಪ್ರಸನ್ನಕುಮಾರ್ ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಜೆ ಎಂ ಎಫ್ ಸಿ
ನ್ಯಾಯಾಲಯ**,**ಹೊಸದುರ್ಗ**.**